ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	763
ಸದಸ್ಯರ ಹೆಸರು	:	ಶ್ರೀ ವಿಜಯ್‌ಸಿಂಗ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿರಾದವರು)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	25/09/2020

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಯಾವ ಯಾವ ಆಹಾರ ಧಾನ್ಯಗಳನ್ನು ಪೂರೈಸಲಾಗುತ್ತದೆ;	ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಯು ಆಹಾರ ಸಾಮಗ್ರಿಗಳ ಬೆಲೆಯನ್ನು ಮತ್ತು ಮೆನುವನ್ನು ನಿರ್ಧರಿಸುತ್ತದೆ. ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುವ ಆಹಾರ ಧಾನ್ಯಗಳು ಜಿಲ್ಲೆಯಿಂದ ಜಿಲ್ಲೆಗೆ ವ್ಯತ್ಯಾಸವಾಗುತ್ತದೆ. ಸಾಮಾನ್ಯವಾಗಿ ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ನ್ಯೂಟ್ರಿಮಿಕ್ಸ್, ಹೆಸರುಬೇಳೆ, ಶೇಂಗಾಬೀಜ, ಹೆಸರುಕಾಳು, ತೊಗರಿಬೇಳೆ, ಒಣಮೆಣಸಿನಕಾಯಿ, ಕಡಲೇಬೇಳೆ, ಬೆಲ್ಲ, ಸಕ್ಕರೆ, ಸಾಂಬಾರು ಪೌಡರ್, ಡಬಲ್ ಫಾರ್ಟಿಫೈಡ್ ಉಪ್ಪು, ಅಕ್ಕಿ, ಗೋಧಿ, ಎಣ್ಣೆ ಹಾಗೂ ಕೋಳಿಮೊಟ್ಟೆಯನ್ನು ಪೂರೈಸಲಾಗುತ್ತಿದೆ.
ಆ	ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಸಲಾಗುತ್ತಿದೆ ಎನ್ನುವ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;	ಬೀದರ್ ಜಿಲ್ಲೆಯಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಸಲಾಗುತ್ತಿರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ.
ಇ.	ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಉತ್ತಮ ಗುಣಮಟ್ಟದ ಆಹಾರ ಸರಬರಾಜು ಮಾಡಲು ಕೈಗೊಂಡಿರುವ ಕ್ರಮಗಳೇನು?	ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಹಾರ ಸಾಮಗ್ರಿಗಳ ದರಗಳನ್ನು ಮತ್ತು ಮೆನುವನ್ನು ನಿಗದಿಪಡಿಸಲು ಸಮಿತಿಯನ್ನು ರಚಿಸಲಾಗಿದೆ. ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿ, ಪರಿಶೀಲಿಸಲಾಗುತ್ತಿದೆ.

		ಇಲಾಖಾ ವತಿಯಿಂದ ಜಿಲ್ಲೆಯ ನೋಡಲ್ ಅಧಿಕಾರಿಗಳು ಜಿಲ್ಲೆಗಳಿಗೆ ಭೇಟಿ ನೀಡಿ ಆಹಾರ ಪದಾರ್ಥಗಳ ಗುಣಮಟ್ಟದ ಬಗ್ಗೆ ಸಹ ಪರಿಶೀಲಿಸುತ್ತಿದ್ದಾರೆ. ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುವ ಆಹಾರ ಪದಾರ್ಥಗಳ ಗುಣಮಟ್ಟದ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ಪರಿಶೀಲಿಸಲಾಗುತ್ತಿದೆ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 185 ಐಸಿಡಿ 2020